**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| **ಸದಸ್ಯರ ಹೆಸರು** | : | **ಶ್ರೀಮತಿ ಉಮಾಶ್ರೀ (ನಾಮ ನಿರ್ದೇಶನ ಹೊಂದಿದವರು)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **39** |
| **ಉತ್ತರಿಸಬೇಕಾದ ಸಚಿವರು** | : | **ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು** |
| **ಉತ್ತರಿಸಬೇಕಾದ ದಿನಾಂಕ** | : | **13.02.2024** |

****

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಆತ್ಮಹತ್ಯೆಗೀಡಾದ ನೇಕಾರರ ಸಂಖ್ಯೆ ಎಷ್ಟು; ಈ ಸಂಬಂಧ ಎಷ್ಟು ಪ್ರಕರಣಗಳು ದಾಖಲಾಗಿವೆ; (ಜಿಲ್ಲಾವಾರು ವಿವರ ನೀಡುವುದು)</td><td>ರಾಜ್ಯದಲ್ಲಿ ಕಳೆದ 04 ವರ್ಷಗಳಲ್ಲಿ 42 ನೇಕಾರರು ಆತ್ಮಹತ್ಯೆಗೆ ಶರಣಾಗಿರುತ್ತಾರೆ.<br>ಜಿಲ್ಲಾವಾರು ವಿವರ ಈ ಕೆಳಕಂಡಂತಿರುತ್ತದೆ:–
<table>
<tr><th>ಕ್ರ.ಸಂ</th><th>ಜಿಲ್ಲೆ</th><th>ನೇಕಾರರ ಸಂಖ್ಯೆ</th></tr>
<tr><td>1</td><td>ಧಾರವಾಡ</td><td>1</td></tr>
<tr><td>2</td><td>ಬೆಳಗಾವಿ</td><td>24</td></tr>
<tr><td>3</td><td>ರಾಮನಗರ</td><td>3</td></tr>
<tr><td>4</td><td>ಬೆಂಗಳೂರು ನಗರ</td><td>1</td></tr>
<tr><td>5</td><td>ಬೆಂ. ಗ್ರಾಮಾಂತರ</td><td>4</td></tr>
<tr><td>6</td><td>ಚಿಕ್ಕಬಳ್ಳಾಪುರ</td><td>1</td></tr>
<tr><td>7</td><td>ಬಾಗಲಕೋಟೆ</td><td>5</td></tr>
<tr><td>8</td><td>ತುಮಕೂರು</td><td>2</td></tr>
<tr><td>9</td><td>ವಿಜಯಪುರ</td><td>1</td></tr>
<tr><td colspan="2">ಒಟ್ಟು</td><td>42</td></tr>
</table>
42 ಪ್ರಕರಣಗಳ ಪೈಕಿ 40 ಪ್ರಕರಣಗಳಿಗೆ ಸಂಬಂಧಿಸಿದಂತೆ FIR ದಾಖಲಿಸಲಾಗಿರುತ್ತದೆ. ರಾಮನಗರ ಜಿಲ್ಲೆಯ 02 ಪ್ರಕರಣಗಳಿಗೆ FIR ದಾಖಲಾಗದ ಕಾರಣ ಪರಿಹಾರಧನ ಪ್ರಸ್ತಾವನೆಗಳನ್ನು ಹಿಂದಿರುಗಿಸಲಾಗಿರುತ್ತದೆ.</td></tr>
<tr><td>ಆ)</td><td>ಆತ್ಮಹತ್ಯೆ ಮಾಡಿಕೊಂಡ ನೇಕಾರರ ಕುಟುಂಬಗಳಿಗೆ ಸರ್ಕಾರ ಯಾವ ರೀತಿಯ ಪರಿಹಾರವನ್ನು ನೀಡುತ್ತಿದೆ; ಇಲ್ಲಿಯವರೆಗೆ ಎಷ್ಟು ಕುಟುಂಬಗಳಿಗೆ ಪರಿಹಾರವನ್ನು ನೀಡಲಾಗಿದೆ; ಪರಿಹಾರ ನೀಡಲು ಬಾಕಿಯಿರುವ ಕುಟುಂಬಗಳು ಸಂಖ್ಯೆ ಎಷ್ಟು; ಮತ್ತು ಯಾವ ಕಾಲಮಿತಿಯಲ್ಲಿ ಪರಿಹಾರವನ್ನು ಮತ್ತು ಯಾವ ಕಾಲಮಿತಿಯಲ್ಲಿ ಪರಿಹಾರವನ್ನು ಮಂಜೂರು ಮಾಡಲಾಗುವುದು; (ವಿವರ ನೀಡುವುದು)</td><td>ಆತ್ಮಹತ್ಯೆ ಮಾಡಿಕೊಂಡ ನೇಕಾರರ ಕುಟುಂಬಗಳಿಗೆ CMRF COVID-19 ವತಿಯಿಂದ ಪರಿಹಾರವನ್ನು ನೀಡಲಾಗಿರುತ್ತದೆ.<br>ಇಲ್ಲಿಯವರೆಗೆ 25 ನೇಕಾರರ ಕುಟುಂಬಗಳಿಗೆ ಸರ್ಕಾರ ದಿಂದ ತಲಾ ರೂ.5.00 ಲಕ್ಷಗಳಂತೆ ಒಟ್ಟು ರೂ.125.00 ಲಕ್ಷಗಳ ಪರಿಹಾರಧನ ನೀಡಲಾಗಿರುತ್ತದೆ.<br>ಉಳಿದ 10 ನೇಕಾರರ ಪ್ರಸ್ತಾವನೆಗಳ ಪೈಕಿ 04 ಪ್ರಸ್ತಾವನೆಗಳನ್ನು ಮೃತ ನೇಕಾರರು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ (PMJJBY) ಅಡಿ ನೋಂದಾಯಿಸಿಕೊಂಡಿದ್ದಲ್ಲಿ ಈ ಯೋಜನೆಯಡಿ ಪರಿಹಾರ ಧನ ಪಡೆಯಲು ಹಿಂಬರಹ ನೀಡಲಾಗಿರುತ್ತದೆ ಮತ್ತು ಬಾಕಿ 06 ಪ್ರಸ್ತಾವನೆಗಳು ಮಾನ್ಯ ಮುಖ್ಯಮಂತ್ರಿಯವರ ಪರಿಹಾರನಿಧಿ ಶಾಖೆಯಲ್ಲಿ ಪರಿಶೀಲನಾ ಹಂತದಲ್ಲಿರುತ್ತದೆ.<br>07 ನೇಕಾರರ ಪ್ರಸ್ತಾವನೆಗಳನ್ನು ಅರ್ಹ ದಾಖಲಾತಿ ಗಳಿಲ್ಲದ ಕಾರಣ ಪ್ರಸ್ತಾವನೆಯನ್ನು ಹಿಂದಿರುಗಿ ಸಲಾಗಿರುತ್ತದೆ.</td></tr>
</table>

..2

| | | |
|---|---|---|
| ಇ) | ರಾಜ್ಯದಲ್ಲಿ ಹೆಚ್ಚುತ್ತಿರುವ ನೇಕಾರರ ಆತ್ಮಹತ್ಯೆಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? | ರಾಜ್ಯದಲ್ಲಿ ನೇಕಾರರ ಆತ್ಮಹತ್ಯೆಗಳನ್ನು ತಡೆಗಟ್ಟಲು ರಾಜ್ಯದ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರಿಗೆ ಇಲಾಖೆಯಿಂದ ಕೆಳಕಂಡ ಯೋಜನೆಗಳಡಿ ಸೌಲಭ್ಯಗಳನ್ನು ಒದಗಿಸಿ ಪ್ರೋತ್ಸಾಹಿಸಲಾಗುತ್ತಿದೆ.<br><br>1. ನೇಕಾರ ಸಮ್ಮಾನ್ (ಕೈಮಗ್ಗ & ವಿದ್ಯುತ್ ಮಗ್ಗ).<br>2. ನೇಕಾರರ ಮಕ್ಕಳಿಗೆ ವಿದ್ಯಾರ್ಥಿ ವೇತನ<br>3. ಕೈಮಗ್ಗ ವಿಕಾಸ ಯೋಜನೆ<br>4. ಕಚ್ಚಾ ನೂಲು ಖರೀದಿಗೆ ರೂ.15.00 ಪ್ರತಿ ಕೆ.ಜಿಗೆ ಸಹಾಯಧನ<br>5. ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೂನ್ಯ ಹಾಗೂ ಶೇ.1 ರ ಬಡ್ಡಿದರದಲ್ಲಿ ರೂ.2.00 ಲಕ್ಷಗಳವರೆಗೆ, ಶೇ.3 ರ ಬಡ್ಡಿದರದಲ್ಲಿ ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳವರೆಗೆ ಸಾಲ ನೀಡಲಾಗುವುದು.<br>6. ನೇಕಾರರು ನೇಕಾರಿಕೆ ಉದ್ದೇಶಕ್ಕಾಗಿ ಸಹಕಾರ ಸಂಘ / ಸಹಕಾರ ಬ್ಯಾಂಕ್ / ವಾಣಿಜ್ಯ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೇ.8ರಷ್ಟು ಬಡ್ಡಿ ಸಹಾಯಧನ ನೀಡಲಾಗುವುದು.<br>7. ಕೈಮಗ್ಗ ಉತ್ಪನ್ನಗಳಿಗೆ ಮಾರುಕಟ್ಟೆ ಸಹಾಯ (20% ರಿಬೇಟ್)<br>8. ಏಳಿಗೆ ನಿಧಿ ಯೋಜನೆಯಡಿ ಸರ್ಕಾರದ ಸಮಚಂದಾ ಹಾಗೂ ಏಳಿಗೆ ನಿಧಿ ಮೇಲಿನ ಬಡ್ಡಿ.<br>9. ಉಣ್ಣೆ ವಲಯ ಪುನಃಶ್ಚೇತನ ಮತ್ತು ಬಲವರ್ಧನೆ ಯೋಜನೆಯಡಿ ಸಹಾಯಧನ.<br>10. 02 ವಿದ್ಯುತ್ ಮಗ್ಗ ಖರೀದಿಗೆ ಸಹಾಯಧನ.<br>11. ಎಲೆಕ್ಟ್ರಾನಿಕ್ ಜಕಾರ್ಡ್ ಖರೀದಿಗೆ ಸಹಾಯಧನ.<br>12. ಮಗ್ಗ ಪೂರ್ವ ಸೌಲಭ್ಯ.<br>13. ವಿದ್ಯುತ್ ಸಹಾಯಧನ (1 ರಿಂದ 20 ಹೆಚ್.ಪಿ. ಘಟಕಗಳು).<br>14. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ರಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ (ಎಸ್.ಎಂ.ಇ) ಘಟಕಗಳ ಸ್ಥಾಪನೆಗೆ ಸಹಾಯಧನ. |

**ಸಂಖ್ಯೆ:CI 23 JAKE 2024**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು